ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ಖಾಸಗಿ ಬಸ್ಸುಗಳಲ್ಲಿ ಲಗೇಜು ಮತ್ತು ಸ್ಫೋಟಕ ಸಾಮಗ್ರಿ ಸಾಗಿಸುವ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) -

55 (533) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಖಾಸಗಿ ಬಸ್ಸುಗಳಲ್ಲಿ ಪ್ರಯಾಣಿಕರಿಗಿಂತ ಹೆಚ್ಚಾಗಿ ಲಗೇಜುಗಳನ್ನು ಸಾಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಆ) ಈ ರೀತಿಯ ಲಗೇಜುಗಳ ಜೊತೆಗೆ ಸ್ಫೋಟಕ / ಮಾದಕ ವಸ್ತುಗಳನ್ನು ಸಾಗಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಸಾರಿಗೆ ಇಲಾಖೆಯ ಕಾಯಿದೆ ಅಡಿಯಲ್ಲಿ ಈ ರೀತಿಯಾಗಿ ಬಸ್‌ಗಳಲ್ಲಿ ಪ್ರಯಾಣಿಕರಿಗಿಂತ ಹೆಚ್ಚು ಲಗೇಜುಗಳನ್ನು ಸಾಗಿಸಲು ಅವಕಾಶವಿದೆಯೇ ಹಾಗೂ ಇದಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದ ಆದೇಶಗಳು ಇವೆಯೇ ; ಇದ್ದಲ್ಲಿ, ಮಾಹಿತಿ ನೀಡುವುದು ;

(ಈ) ಈ ಬಗ್ಗೆ ಸಾರಿಗೆ ಇಲಾಖೆಯ ಮೋಟಾರು ವಾಹನ ಕಾಯ್ದೆಯಡಿ ಇರುವ ಮಾನದಂಡಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)